**ಕರ್ನಾಟಕ ಸರ್ಕಾರ**

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ತರೀಕೆರೆ.**

**ಸಿ.ಸಿ.ನಂ. 647/2021**

ಪಿ.ಡಬ್ಲ್ಯೂ: 4

ಸಿ.ಡಬ್ಲ್ಯೂ:4

ಸಾಕ್ಷಿದಾರರ ಹೆಸರು : ಕುಮಾರ

ತಂದೆಯ ಹೆಸರು : ಕೃಷ್ಣಪ್ಪ

ವಯಸ್ಸು : **55 ವರ್ಷ**

ಉದ್ಯೋಗ : ವ್ಯಾಪಾರ

ವಾಸಸ್ಥಳ : ರಂಗೇನಹಳ್ಳಿ

**ದಿನಾಂಕ: 07-07-2025 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು**

**ಮುಖ್ಯ ವಿಚಾರಣೆ :** ಸಹಾಯಕ ಸರ್ಕಾರಿ ಅಭಿಯೋಜಕರವರಿಂದ

ಈಗ್ಗೆ ಸುಮಾರು 4-5 ವರ್ಷಗಳ ಹಿಂದೆ ನಾನು ರಂಗೇನಹಳ್ಳಿ ಗ್ರಾಮದಲ್ಲಿ ತಿಮ್ಮನಾಯ್ಕರವರ ಮನೆಯ ಹತ್ತಿರ ಪೊಲೀಸರ ಕೋರಿಕೆಯ ಮೇರೆಗೆ ಒಂದು ದಾಖಲಾತಿಗೆ ಸಹಿ ಮಾಡಿದ್ದು, ಸದರಿ ದಾಖಲೆಯಲ್ಲಿ ಬರೆದಿರುವ ವಿಚಾರಗಳು ನನಗೆ ಗೊತ್ತಿರುವುದಿಲ್ಲ. ನನ್ನ ಸಮಕ್ಷಮದಲ್ಲಿ ಪೊಲೀಸರು ಯಾವುದೇ ವಸ್ತುಗಳನ್ನು ಅಮಾನತ್ತುಪಡಿಸಿಕೊಂಡಿರುವುದಿಲ್ಲ.

ಸಾಕ್ಷಿಗೆ ಮತ್ತೊಂದು ದಾಖಲಾತಿಯನ್ನು ತೋರಿಸಲಾಗಿದ್ದು, ಅದು ಅಮಾನತ್ತು ಮಹಜರ್ ಆಗಿದ್ದು, ಸದರಿ ದಾಖಲೆಯನ್ನು ನಿಪಿ-4 ಎಂದು, ಸಾಕ್ಷಿಯ ಸಹಿಯನ್ನು ನಿಪಿ-4(ಎ) ಎಂದು ಗುರುತಿಸಲಾಯಿತು.

ಸಾಕ್ಷಿಗೆ ಒಂದು ಛಾಯಚಿತ್ರವನ್ನು ತೋರಿಸಲಾಗಿದ್ದು, ಅದನ್ನು ನಿಪಿ-5 ಎಂದು ಗುರುತಿಸಲಾಯಿತು.

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.)**

**ಪಾಟೀ ಸವಾಲು:** ಸಹಾಯಕ ಸರ್ಕಾರಿ ಅಭಿಯೋಜಕರವರಿಂದ

ದಿ: 17-09-2020 ರಂದು ರಂಗೇನಹಳ್ಳಿಯ ಹೊಸಮನೆ ಗೇಟ್ ವಾಸಿಯಾದ ರೇವಣ್ಣ ಎಂಬುವವರ ಮನೆಯಲ್ಲಿ ಚಾಸಾ-1 ರವರು ಬಾಡಿಗೆಗೆ ಇದ್ದು, ಸದರಿ ಮನೆಯಲ್ಲಿ ಸಂಜೆ 5-55 ರಿಂದ 6-25 ರವರೆಗೆ ಲಕ್ಕವಳ್ಳಿ ಪೊಲೀಸರು ಕಳ್ಳತನವಾದ ವಿಚಾರದಲ್ಲಿ ಪೊಲೀಸರು ಮಹಜರ್ ಮಾಡಿರುತ್ತಾರೆ, ಅದಕ್ಕೆ ನೀವು ಸಹಿ ಮಾಡಿರುತ್ತೀರಾ ಎಂದರೆ ಸಾಕ್ಷಿ ಮಹಜರ್ ಗೆ ಸಹಿ ಮಾಡಿರುತ್ತೇನೆಂದು ನುಡಿದಿರುತ್ತಾರೆ.

ಆ ಸಮಯದಲ್ಲಿ ಪೊಲೀಸರು ನಿಮ್ಮ ಸಮಕ್ಷಮ ಒಂದು ಬೀಗ, ಲಾಕರ್, ಬಂಗಾರದ ಒಡವೆಗಳನ್ನು ಅಮಾನತ್ತುಪಡಿಸಿಕೊಂಡಿರುತ್ತಾರೆಂದರೆ ಸಾಕ್ಷಿ ನನಗೆ ಗೊತ್ತಿಲ್ಲ ಎಂದು ನುಡಿದಿರುತ್ತಾರೆ.

**ಪಾಟೀ ಸವಾಲು : ಆರೋಪಿ ಪರ ವಕೀಲರಿಂದ.**

ಪೊಲೀಸರು ಮೊದಲೇ ಬರೆದಿಟ್ಟ ಮಹಜರ್ ಗೆ ನೀವು ಸಹಿ ಹಾಕಿರುತ್ತೀರಾ ಎಂದರೆ ಸಾಕ್ಷಿ ಹೌದು ಎಂದು ನುಡಿದಿರುತ್ತಾರೆ, ನಿಮ್ಮ ಮುಂದೆ ಸಾಕ್ಷಿ ಯಾವುದೇ ಮಹಜರ್ ಬರೆದಿಲ್ಲ ಎಂದರೆ ಸರಿ ಎಂದು ನುಡಿದಿರುತ್ತಾರೆ.

**ಮರುವಿಚಾರಣೆಃ** ಇರುವುದಿಲ್ಲ.

**(ತೆರೆದ ನ್ಯಾಯಾಲಯದಲ್ಲಿ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)**

ಓ. ಕೇ. ಸ. ಇ. ಎ. ಒ.

Sd/-

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು

**ಪ್ರ.ದ.ನ್ಯಾ.ದಂ.ರವರು,ತರೀಕೆರೆ.**